ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೊ/ವೈದ್ಯ-19 7

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 18/10/20

# ಸಿದ್ಧಗಂಗಾ ಶ್ರೀ ಹೋಂ ಕ್ವಾರಂಟೈನ್



**ತುಮಕೂರು:** ಕೊರೊನಾದಿಂದ ಮೃತಪಟ್ಟ ವ್ಯಕ್ತಿಯ ಅಂತ್ಯಸಂಸ್ಕಾರದಲ್ಲಿ ಭಾಗವಹಿಸಿದ್ದರಿಂದ ಸರ್ಕಾರದ ನಿಯಮದ ಪ್ರಕಾರ 7 ದಿನ ಹೋಂ ಕ್ವಾರಂಟೈನ್‌ನಲ್ಲಿ ಇರುವುದಾಗಿ ಶ್ರೀ ಸಿದ್ಧಗಂಗಾ ಮಠಾಧ್ಯಕ್ಷ ಶ್ರೀ ಸಿದ್ಧಲಿಂಗಸ್ವಾಮೀಜಿ ತಿಳಿಸಿದ್ದಾರೆ. ನಗರದ ಭೂಮಿ ಬಳಗದ ಅಧ್ಯಕ್ಷ ಜಿ.ಎಸ್.ಸೋಮಶೇಖರ್ ಕೊರೊನಾದಿಂದ ನಿಧನ ಹೊಂದಿದ್ದ ಹಿನ್ನೆಲೆಯಲ್ಲಿ ಅವರ ಅಂತ್ಯಕ್ರಿಯೆ ಸಿದ್ಧಗಂಗಾ ಮಠದ ಆವರಣದಲ್ಲಿ ನಡೆದಿತ್ತು. ಆ ಸಮಯದಲ್ಲಿ ತಾವು ಭಾಗವಹಿಸಿರುವುದರಿಂದ ಹೋಂ ಕ್ವಾರಂಟೈನ್‌ನಲ್ಲಿ ಇರುವುದಾಗಿ ಶ್ರೀಗಳು ತಿಳಿಸಿದ್ದಾರೆ. ಜಿ.ಎಸ್.ಸೋಮಶೇಖರ್ ಶ್ರೀ ಮಠದೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದು, ಆದ್ದರಿಂದ ಅವರ ಅಂತ್ಯಕ್ರಿಯೆ ವೇಳೆ ನಾವು ಭಾಗವಹಿಸಿದ್ದೇವೆ ಎಂದು ಸಿದ್ಧಗಂಗಾ ಮಠಾಧ್ಯಕ್ಷರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.